# Telephone Conversation between Prime Minister and President of Sri Lanka

May 23, 2020

---

## ಪ್ರಧಾನ ಮಂತ್ರಿ ಮತ್ತು ಶ್ರೀಲಂಕಾದ ಅಧ್ಯಕ್ಷರ ನಡುವಿನ ದೂರವಾಣಿ ಸಂಭಾಷಣೆ

ಮೇ 23, 2020

ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಯವರು ಈ ಪ್ರದೇಶದಲ್ಲಿ ಹೆಚ್ಚುತ್ತಿರುವ COVID-19 ಸಾಂಕ್ರಾಮಿಕ ರೋಗ ಮತ್ತು ಆರೋಗ್ಯ ಹಾಗೂ ಆರ್ಥಿಕ ಪರಿಣಾಮಗಳ ಬಗ್ಗೆ ಶ್ರೀಲಂಕಾದ ಅಧ್ಯಕ್ಷರಾದ ಶ್ರೇಷ್ಠ ಗೋತಬಯಾ ರಾಜಪಕ್ಸೆ ರೊಂದಿಗೆ ಇಂದು ದೂರವಾಣಿ ಸಂಭಾಷಣೆ ನಡೆಸಿದರು.

ಸಾಂಕ್ರಾಮಿಕ ರೋಗದ ಪರಿಣಾಮಗಳನ್ನು ತಗ್ಗಿಸಲು ಭಾರತ ಶ್ರೀಲಂಕಾಕ್ಕೆ ಸಾಧ್ಯವಿರುವ ಎಲ್ಲಾ ಬೆಂಬಲವನ್ನು ನೀಡುತ್ತಲೇ ಇರುತ್ತದೆ ಎಂದು ಪ್ರಧಾನ ಮಂತ್ರಿಯವರು ಶ್ರೀಲಂಕಾ ಅಧ್ಯಕ್ಷರಿಗೆ ಭರವಸೆ ನೀಡಿದರು.

ಆರ್ಥಿಕ ಚಟುವಟಿಕೆಗಳನ್ನು ಪುನರಾರಂಭಿಸಲು ತಮ್ಮ ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳ ಬಗ್ಗೆ ಅಧ್ಯಕ್ಷ ರಾಜಪಕ್ಸೆಯವರು ಪ್ರಧಾನ ಮಂತ್ರಿಗೆ ವಿವರಿಸಿದರು. ಈ ಹಿನ್ನೆಲೆಯಲ್ಲಿ ಶ್ರೀಲಂಕಾದಲ್ಲಿ ಭಾರತೀಯ ನೆರವಿನ ಅಭಿವೃದ್ಧಿ ಯೋಜನೆಗಳನ್ನು ಚುರುಕುಗೊಳಿಸುವ ಅಗತ್ಯವನ್ನು ಇಬ್ಬರು ನಾಯಕರು ಒಪ್ಪಿಕೊಂಡರು. ಶ್ರೀಲಂಕಾದಲ್ಲಿ ಭಾರತೀಯ ಖಾಸಗಿ ವಲಯದ ಹೂಡಿಕೆಗಳನ್ನು ಉತ್ತೇಜಿಸುವ ಮತ್ತು ಮೌಲ್ಯವರ್ಧನೆಯ ಸಾಧ್ಯತೆಗಳ ಬಗ್ಗೆಯೂ ಸಹ ಅವರು ಚರ್ಚಿಸಿದರು.

ಶ್ರೀಲಂಕಾದ ಜನರ ಆರೋಗ್ಯ ಮತ್ತು ಯೋಗಕ್ಷೇಮಕ್ಕಾಗಿ ಪ್ರಧಾನ ಮಂತ್ರಿಯವರು ತಮ್ಮ ಶುಭಾಶಯಗಳನ್ನು ತಿಳಿಸಿದರು.

**ನವ ದೆಹಲಿ**

**ಮೇ 23, 2020**

DISCLAIMER: This is an approximate translation. The original is available in English on MEA’s website and may be referred to as the official press release.